**All India Radio: Bangalore**
**Regional Bulletin In Kannada**
**08.04.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**08.04.2025 / 2.30 p.m.**
**<><><><>**

ಮುಖ್ಯಾಂಶಗಳು

1. ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ ; ಉಡುಪಿ ಜಿಲ್ಲೆಗೆ ಮೊದಲ ಸ್ಥಾನ
2. ರಾಜ್ಯದಲ್ಲಿ ಬಾಟಲ್‌ಗಳಲ್ಲಿ ಸಂಗ್ರಹಿತ ಕುಡಿಯುವ ನೀರು ಕಳಪೆ - ಆಹಾರ ಇಲಾಖೆ ವರದಿ
3. ಯಾವುದೇ ಕಾರಣಕ್ಕೂ ಬಗರ್ ಹುಕುಂ ರೈತರನ್ನು ಒಕ್ಕಲೆಬ್ಬಿಸಬಾರದು : ಅಧಿಕಾರಿಗಳಿಗೆ ಕೇಂದ್ರ ಸಚಿವ ವಿ. ಸೋಮಣ್ಣ ಸೂಚನೆ
4. ಪೊಲೀಸ್ ಇಲಾಖೆ ಸೇರಿದಂತೆ ಸರ್ಕಾರಿ ನೌಕರರಿಗೆ ವೇತನ ವಿಳಂಬ ; ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಸಮಾಧಾನ
5. ಶಿವಮೊಗ್ಗದಲ್ಲಿ ನಕಲಿ ಚಿನ್ನಾಭರಣ ಅಡವಿಟ್ಟ ಪ್ರಕರಣ ; ರಾಜ್ಯದ ವಿವಿಧೆಡೆ ಇಡಿ ಅಧಿಕಾರಿಗಳಿಂದ ದಾಳಿ

<><><><>

ಕಳೆದ ಮಾರ್ಚ್‌ನಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ ಪ್ರಕಟವಾಗಿದ್ದು, ಒಟ್ಟಾರೆ ಶೇಕಡ ೭೩.೪೫ ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಿದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧುಬಂಗಾರಪ್ಪ ಈ ಮಾಹಿತಿ ನೀಡಿದ್ದಾರೆ. ಕಲಾ ವಿಭಾಗದಲ್ಲಿ ಶೇಕಡ ೫೩.೨೯, ವಾಣಿಜ್ಯ ವಲಯದಲ್ಲಿ ಶೇಕಡ ೭೬.೦೭ ಮತ್ತು ವಿಜ್ಞಾನ ವಿಭಾಗದಲ್ಲಿ ಶೇಕಡ ೮೨.೫೪ ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಎಂದಿನಂತೆ ಈ ಬಾರಿಯೂ ಬಾಲಕಿಯರೇ ಮೈಲುಗೈ ಸಾಧಿಸಿದ್ದಾರೆ. ಶೇಕಡ ೭೭.೮೮ರಷ್ಟು ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದಾರೆ. ಬಾಲಕರು ೬೮.೨೦ ರಷ್ಟು ಫಲಿತಾಂಶ ದಾಖಲಿಸಿದ್ದಾರೆ. ಉಡುಪಿ ಜಿಲ್ಲೆ ಶೇಕಡ ೯೩.೯೦ ರಷ್ಟು, ಫಲಿತಾಂಶದೊಂದಿಗೆ ಅಗ್ರಸ್ಥಾನದಲ್ಲಿದ್ದು, ದಕ್ಷಿಣ ಕನ್ನಡ ಶೇಕಡ ೯೩.೫೭ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲೆಯ ಶೇಕಡ ೮೫.೩೬ ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ. ಯಾದಗಿರಿ ಜಿಲ್ಲೆ ಶೇಕಡ ೪೮.೪೫ ರಷ್ಟು ಫಲಿತಾಂಶದೊಂದಿಗೆ ಕೊನೆಯ ಸ್ಥಾನದಲ್ಲಿದೆ. ವಿಜ್ಞಾನ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಎಕ್ಸ್‌ಪರ್ಟ್ ಪಿಯು ಕಾಲೇಜಿನ ಅಮೂಲ್ಯ ಕಾಮತ್ ಮೊದಲ ಸ್ಥಾನ ಪಡೆದಿದ್ದಾರೆ. ದಕ್ಷಿಣ ಕನ್ನಡದ ಕೆನರಾ ಪಿಯು ಕಾಲೇಜಿನ ವಿದ್ಯಾರ್ಥಿನಿ ದೀಪಶ್ರಿ ವಾಣಿಜ್ಯ ವಿಭಾಗದಲ್ಲಿ ಮೊದಲ ಸ್ಥಾನ ಪಡೆದಿದ್ದಾರೆ. ಕಲಾ ವಿಭಾಗದಲ್ಲಿ ಬಳ್ಳಾರಿಯ ಇಂದು ಪಿಯು ಕಾಲೇಜಿನ ವಿದ್ಯಾರ್ಥಿನಿ ಸಂಜನಾ ಬಾಯಿ ಪ್ರಥಮ ಸ್ಥಾನ ಪಡೆದಿದ್ದಾರೆ. ದ್ವೀತಿಯ ಪಿಯುಸಿ ಪರೀಕ್ಷೆ ೨ಅನ್ನು ಇದೇ ೨೪ ರಿಂದ ಮೇ ೮ರವರೆಗೆ ನಡೆಸಲಾಗುವುದು ಎಂದು ಪಿಯು ಶಿಕ್ಷಣ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

<><><><>

ಬಾಟಲ್‌ಗಳ ಮೂಲಕ ಪೂರೈಕೆಯಾಗುವ ಕುಡಿಯುವ ನೀರು ಕಳಪೆ ಎಂದು ಆಹಾರ ಇಲಾಖೆ ವರದಿ ತಿಳಿಸಿದೆ. ಈ ಕುರಿತು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈಗಾಗಲೇ ೨೯೬ ಕುಡಿಯುವ ನೀರಿನ ಬಾಟಲ್ ಮಾದರಿಗಳ ಪರೀಕ್ಷೆ ಮಾಡಲಾಗಿದೆ. ಇದರಲ್ಲಿ ೭೨ ಸುರಕ್ಷಿತ ಹಾಗೂ ೯೦ ಮಾದರಿಗಳು ಅಸುರಕ್ಷಿತ ಎಂದು ವರದಿಯಾಗಿದೆ ಎಂದು ಮಾಹಿತಿ ನೀಡಿದ್ದಾರೆ. ನೀರು ಮಾತ್ರವಲ್ಲದೇ ಖಾರ ಮಿಕ್ಚರ್, ಪನ್ನೀರ್ ಹಾಗೂ ಐಸ್‌ಕ್ರೀಮ್ ಘಟಕಗಳಿಗೂ ನೋಟಿಸ್ ಜಾರಿ ಮಾಡಲಾಗಿದೆ. ತಯಾರಿಕಾ ಘಟಕಗಳಲ್ಲಿ ಲೋಪ ಕಂಡುಬಂದ  ಹಿನ್ನೆಲೆಯಲ್ಲಿ ನೋಟಿಸ್ ನೀಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><><>

ಯಾವುದೇ ಕಾರಣಕ್ಕೂ ಬಗರ್ ಹುಕುಂ ರೈತರನ್ನು ಒಕ್ಕಲೆಬ್ಬಿಸದಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ತುಮಕೂರಿನ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ದಿಶಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು ಬಗರ್ ಹುಕುಂ ಅರ್ಜಿ ಸಲ್ಲಿಸಿರುವವರಿಗೆ ಅನ್ಯಾಯವಾಗಬಾರದು, ಸರ್ಕಾರದ ಸೂಚನೆಯಂತೆ ೩ ಎಕರೆಗಿಂತ ಕಡಿಮೆ ಭೂಮಿ ಒತ್ತುವರಿ ತೆರವುಗೊಳಿಸದಂತೆ ತಿಳಿಸಿದ್ದಾರೆ. ಅರಣ್ಯ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಜಿಲ್ಲಾಧಿಕಾರಿಗಳೊಂದಿಗೆ ಕುಳಿತು ಸಮಸ್ಯೆ ಬಗೆಹರಿಸಬೇಕು. ಏಕಾಏಕಿ ಯಾವುದೇ ಅರ್ಜಿಗಳನ್ನು ವಜಾಗೊಳಿಸದಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ದಿಶಾ ಸಮಿತಿಗೆ ಗೈರು ಹಾಜರಾಗಿರುವ ತಹಶೀಲ್ದಾರ್‌ಗಳಿಗೆ ಶೋಕಾಸ್ ನೋಟೀಸ್ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><>

ರಾಜ್ಯದಲ್ಲಿ ಆಲ ಅಗತ್ಯ ವಸ್ತುಗಳ ಬೆಲೆ ಹೆಚ್ಚಳವಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಲೆ ಏರಿಕೆಗೆ ತಜ್ಞರ ಸಮಿತಿ ರಚಿಸಿದಂತೆ ಕಾಣುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಮೈಸೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆಟ್ರೋಲ್, ನೀರು, ಡೀಸೆಲ್ ದರ ಹೆಚ್ಚಿಸಿದ್ದು, ಕಸದ ಮೇಲೂ ಸುಂಕ ವಿಧಿಸುತ್ತಿದ್ದಾರೆ. ಹಾಲಿನ ದರ ೯ ರೂಪಾಯಿ ಜಾಸ್ತಿ ಆಗಿದೆ ಎಂದು ದೂರಿದ್ದಾರೆ. ಪೊಲೀಸ್ ಇಲಾಖೆ, ಶಿಕ್ಷಕರು ಸರ್ಕಾರಿ ನೌಕರರಿಗೆ. ಇನ್ನು ವೇತನವಾಗಿಲ್ಲ ಇದು ರಾಜ್ಯದ ಹಣಕಾಸಿನ ಪರಿಸ್ಥಿತಿಗೆ ಹಿಡಿದ  ಕೈಗನ್ನಡಿ ಎಂದು ತಿಳಿಸಿದ್ದಾರೆ.

<><><>

ನಕಲಿ ಚಿನ್ನದ ಸಾಲ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಶಿವಮೊಗ್ಗ ಮತ್ತು ಬೆಂಗಳೂರಿನಲ್ಲಿ ಎಂಟಕ್ಕೂ ಹೆಚ್ಚು ಸ್ಥಳಗಳಲ್ಲಿ ದಾಳಿ ನಡೆಸಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ತಿಳಿಸಿದೆ. ಡಿಸಿಸಿ ಬ್ಯಾಂಕ್ ಮಾಜಿ ಮ್ಯಾನೇಜರ್ ಆಗಿದ್ದ ಸಂದರ್ಭದಲ್ಲಿ ನಕಲಿ ಚಿನ್ನ ಅಡವಿಟ್ಟು ೬೨ ಕೋಟಿ ರೂಪಾಯಿ  ಸಾಲ ನೀಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಶಿವಮೊಗ್ಗದಲ್ಲಿ ಲಕ್ಕೂ ಹೆಚ್ಚಿನ ಇಡಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದ್ದಾರೆ. ಶಿವಮೊಗ್ಗದ ಗೋಪಾಲಗೌಡ ಬಡಾವಣೆಯಲ್ಲಿರುವ ಮಾಜಿ ವ್ಯವಸ್ಥಾಪಕರ ನಿವಾಸದ ಮೇಲೂ ದಾಳಿ ನಡೆದಿದೆ. ಅಪೆಕ್ಸ್ ಬ್ಯಾಂಕ್ ಅತಿಥಿ ಗೃಹದಲ್ಲಿ ಮಾಜಿ ಅಧ್ಯಕ್ಷರನ್ನು

ಹತ್ತಕ್ಕೂ ಹೆಚ್ಚು ಇಡಿ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆ. ಬೆಂಗಳೂರಿನ ಇತರ ಸ್ಥಳಗಳಲ್ಲೂ ಏಕಕಾಲದಲ್ಲಿ ದಾಳಿ ನಡೆಸಿರುವ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

<><><><>

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪತ್ನಿ ಪಾರ್ವತಿ ಬಗ್ಗೆ ಲೋಕಾಯುಕ್ತ ಸಲ್ಲಿಸಿದ ಆರೋಪ ಮುಕ್ತ ವರದಿಗೆ ಜಾರಿ ನಿರ್ದೇಶನಾಲಯ ಸಲ್ಲಿಸಿದ ಆಕ್ಷೇಪಣೆ ಅರ್ಜಿಯ ವಿಚಾರಣೆ ಇಂದು ನಡೆಯಲಿದೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಇಂದು ತೀರ್ಪು ನೀಡುವ ಸಾಧ್ಯತೆಯಿದೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಲೋಕಾಯುಕ್ತ ತನಿಖೆ ಪ್ರಶ್ನಿಸಿ ಅರ್ಜಿದಾರ ಸ್ನೇಹಮಹಿ ಕೃಷ್ಣ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿದ್ದರು.

<><><><>

ಅಬಕಾರಿ ಇಲಾಖೆಯಲ್ಲಿ ಯಾವುದೇ ರೀತಿಯ ಭ್ರಷ್ಟಾಚಾರಕ್ಕೆ ಆಸ್ಪದ ನೀಡುವುದಿಲ್ಲ ಎಂದು ಅಬಕಾರಿ ಸಚಿವ ಆರ್. ಬಿ. ತಿಮ್ಮಾಪುರ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಸಮಗ್ರ ತನಿಖೆ ನಡೆಸುವಂತೆ ಈಗಾಗಲೇ ಆಯುಕ್ತರಿಗೆ ಸೂಚಿಸಲಾಗಿದೆ. ಇದುವರೆಗೂ ಯಾರೂ ಈ ಸಂಬಂಧ ದೂರು ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಅಧಿಕಾರಿಗಳ ಕಿರುಕುಳ, ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ದೂರು ನೀಡಿದರೇ ಸೂಕ್ತ ರೀತಿಯಲ್ಲಿ ತನಿಖೆ ನಡೆಸಿ, ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

<><><><>

ಪಕ್ಷ ಸಂಘಟನೆಯ ವಿಚಾರದಲ್ಲಿ ಬದಲಾವಣೆಗಳನ್ನು ತರಲಾಗುತ್ತಿದ್ದು, ಕಾಂಗ್ರೆಸ್ ಪಕ್ಷವನ್ನು ಕಾರ್ಯಕರ್ತರ ಪಕ್ಷವಾಗಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಅಹಮಾದಾಬಾದ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿಯ ಜನಾಕ್ರೋಶ ಯಾತ್ರೆಯನ್ನು ಸ್ವಾಗತಿಸುವುದಾಗಿ ತಿಳಿಸಿದ್ದಾರೆ. ಪೆಟ್ರೋಲ್, ಡೀಸಲ್, ಅಡುಗೆ ಅನಿಲ ಬೆಲೆ ಏರಿಕೆ ಮಾಡಿರುವ ಕೇಂದ್ರ ಸರ್ಕಾರದ ವಿರುದ್ಧ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><><>

ಸಣ್ಣ ಉದ್ಯಮಗಳನ್ನು ಉತ್ತೇಜಿಸಿ, ಉದ್ಯಮಿಗಳಲ್ಲಿ ಉದ್ಯಮಶೀಲತೆ ಚಟುವಟಿಕೆಗಳನ್ನು ಉತ್ತೇಜಿಸುವ ಸಲುವಾಗಿ ಕೇಂದ್ರ ಸರ್ಕಾರ ಜಾರಿಗೆ ತಂದಿದ್ದ ಪ್ರಧಾನ ಮಂತ್ರಿ ಮುದ್ರಾ ಯೋಜನೆಗೆ ಇಂದು ದಶಮಾನೋತ್ಸವದ ಸಂಭ್ರಮ ಈ ಯೋಜನೆಯಡಿ ಪಡೆದ ಸಾಲದಿಂದ ಆಟೋ ಖರೀದಿಸಿ ಬದುಕು ಕಟ್ಟಿಕೊಂಡಿರುವ ದಾವಣಗೆರೆಯ ಆನಂದ್ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ಆನಂದ್

<><><><>

ಮಂಡ್ಯ ಜಿಲ್ಲಾಡಳಿತ, ಧಾರ್ಮಿಕ ಮತ್ತು ದತ್ತಿ ಇಲಾಖೆ ಆಶ್ರಯದಲ್ಲಿ ವಿಶ್ವ ವಿಖ್ಯಾತ ಮೇಲುಕೋಟೆ ವೈರಮುಡಿ ಉತ್ಸವ ಅದ್ದೂರಿಯಾಗಿ ನೆರವೇರಿತು. ವಜ್ರಖಚಿತ ವೈರಮುಡಿ ಹಾಗೂ ರಾಜಮುಡಿ ಧರಿಸಿದ್ದ ಚಲುವನಾರಾಯಣಸ್ವಾಮಿಯ ಉತ್ಸವ ಮೂರ್ತಿಯನ್ನು ಕಳೆದ ರಾತ್ರಿ ದೇಗುಲದಿಂದ ಮೆರವಣಿಗೆ ಮೂಲಕ

ತರಲಾಯಿತು. ಮೇಲುಕೋಟೆ ರಾಜಬೀದಿಗಳಲ್ಲಿ ವಜ್ರಖಚಿತ ಚಲುವನಾರಾಯಣಸ್ವಾಮಿಯ ವೈರಮುಡಿ ಉತ್ಸವ ಮಂಗಳವಾರ ಬೆಳಗಿನ ಜಾವದವರೆಗೂ ನಡೆಯಿತು. ಕರ್ನಾಟಕ ಮಾತ್ರವಲ್ಲದೇ ನೆರೆಯ ತಮಿಳುನಾಡು, ಕೇರಳ, ಆಂಧ್ರ ಸೇರಿದಂತೆ ದೇಶದ ಹಲವು ಭಾಗಗಳಿಂದ ಬಂದಿದ್ದ ಲಕ್ಷಾಂತರ ಭಕ್ತರು ವೈರಮುಡಿ ಉತ್ಸವವನ್ನು ಕಣ್ತುಂಬಿಕೊಂಡರು. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಸೇರಿದಂತೆ ಹಲವು ಗಣ್ಯರು ಉತ್ಸವದಲ್ಲಿ ಪಾಲ್ಗೊಂಡಿದ್ದರು. ಉತ್ಸವದಲ್ಲಿ ಮಾತನಾಡಿದ ಸಚಿವ ಚಲುವರಾಯಸ್ವಾಮಿ, ಮೇಲುಕೋಟೆ ಅಭಿವೃದ್ಧಿ ಪ್ರಾಧಿಕಾರ ತೆರೆಯಲು ಗಂಭೀರ ಚಿಂತನೆ ನಡೆಸಿದ್ದು, ಶೀಘ್ರದಲ್ಲೇ ಈ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

<><><><>

ಜಲ್ ಜೀವನ್ ಮಿಷನ್ ಯೋಜನೆಯಡಿ ಶೀಘ್ರವೇ ದಾವಣಗೆರೆ ಜಿಲ್ಲೆಯ ೧೦೦ ಗ್ರಾಮಗಳಲ್ಲಿ ದಿನದ ೨೪ ಗಂಟೆಗಳ ಕಾಲ ಕುಡಿಯುವ ನೀರು ಪೂರೈಕೆ ಕಾರ್ಯಗತಗೊಳ್ಳಲಿದೆ ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ದಾವಣಗೆರೆ ತಾಲ್ಲೂಕಿನ ಕನಗೊಂಡನಹಳ್ಳಿಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರು ಪೂರೈಕೆಗೆ ಚಾಲನೆ ನೀಡಿ ಮಾತನಾಡಿದ ಅವರು, ಶುದ್ಧ ಕುಡಿಯುವ ನೀರು ಪೂರೈಕೆಯಿಂದ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>